ಸಂಪುಟ: ೦೭/ ಸಂಚಿಕೆ: ೨೧೯/ ಬುಧವಾರ ದಿನಾಂಕ : ೨೨-೧೦-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 219/WEDNESDAY Date : 22-10-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ರಾಜ್ಯ ಅಭಿವೃದ್ಧಿಗೆ ಶಾಂತಿ ಸುವ್ಯವಸ್ಥೆ ಆಧಾರ: ಮುಖ್ಯಮಂತ್ರಿ



**ಬೆಂಗಳೂರು:** ರಾಜ್ಯದಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡಿದರೆ ಮಾತ್ರ ಅಭಿವೃದ್ಧಿ ಸಾಧ್ಯ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಹೇಳಿದರು. ಅನೈತಿಕ ಪೊಲೀಸ್‌ಗಿರಿಗೆ ಕಡಿವಾಣ ಬಿದ್ದಿರುವುದು ಹಾಗೂ ಮಾದಕ ವಸ್ತುಗಳ ಹಾವಳಿಗೆ ಬ್ರೇಕ್ ಬಿದ್ದಿರುವುದು ರಾಜ್ಯದ ಶ್ರೇಯಸ್ಸಿಗೆ ಕಾರಣವಾಗಿದ್ದು, ಈ ಸಾಧನೆಯ ಶ್ರೇಯಸ್ಸು ಸಂಪೂರ್ಣವಾಗಿ ಪೊಲೀಸ್ ಇಲಾಖೆಗೆ ಸಲ್ಲುತ್ತದೆ ಎಂದರು.

ಮಂಗಳವಾರ ಬೆಂಗಳೂರಿನ ಮೈಸೂರು ರಸ್ತೆಯ ಸಿ.ಎ.ಆರ್ ಕೇಂದ್ರಸ್ಥಾನದ ಹುತಾತ್ಮರ ಉದ್ಯಾನವನದಲ್ಲಿ ನಡೆದ ಪೊಲೀಸ್ ಸಂಸ್ಮರಣಾ ದಿನಾಚರಣೆಯಲ್ಲಿ ಅವರು ಮಾತನಾಡಿದರು. ಹುತಾತ್ಮ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಸಂತಾಪ ಸಲ್ಲಿಸಿ ಮಾತನಾಡಿದ ಅವರು,

"ರಾಜ್ಯದ ಘನತೆ, ಅಭಿವೃದ್ಧಿ ಹಾಗೂ ಪ್ರಗತಿಗೆ ಅಡ್ಡಿಯಾಗುತ್ತಿದ್ದ ಸಂವಿಧಾನ ವಿರೋಧಿ ಅನೈತಿಕ ಪೊಲೀಸ್ ಗಿರಿಗೆ ಕಡಿವಾಣ ಬಿದ್ದಿದೆ. ಇದರ ಶ್ರೇಯಸ್ಸು ಪೊಲೀಸ್ ಇಲಾಖೆಗೆ ಸಲ್ಲಬೇಕು" ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಮುಖ್ಯಮಂತ್ರಿಗಳು ಮುಂದುವರಿದು, ಪರಿಶಿಷ್ಟ ಜಾತಿ ವರ್ಗದವರ ಮೇಲಿನ ದೌರ್ಜನ್ಯ ತಡೆಗಟ್ಟಲು ಡಿಸಿಆರ್‌ಇ ಪೊಲೀಸ್ ಠಾಣೆಗಳನ್ನು ಕಾರ್ಯೋನ್ಮುಖಗೊಳಿಸಲಾಗಿದೆ. ಇವು ಸಂವಿಧಾನಾತ್ಮಕ ಹಕ್ಕುಗಳು ಮತ್ತು ಮೌಲ್ಯಗಳನ್ನು ಕಾಪಾಡುವಲ್ಲಿ ಪ್ರಮುಖ ಪಾತ್ರವಹಿಸಬೇಕು ಎಂದು ಹೇಳಿದರು.

ಒಂದು ವರ್ಷದ ಅವಧಿಯಲ್ಲಿ ರಾಜ್ಯದ 8 ಮಂದಿ ಸೇರಿದಂತೆ ದೇಶದಾದ್ಯಂತ 191 ಮಂದಿ ಪೊಲೀಸ್ ಸಿಬ್ಬಂದಿ ಕರ್ತವ್ಯ ನಿರ್ವಹಣೆಯ ವೇಳೆ ಪ್ರಾಣ ತ್ಯಾಗ ಮಾಡಿದ್ದಾರೆ. "ಇವರ ತ್ಯಾಗ, ಬಲಿದಾನಕ್ಕೆ ಬೆಲೆ ಕಟ್ಟಲಾಗದು. ದೇಶದ ಶಾಂತಿ-ಸುವ್ಯವಸ್ಥೆ ಕಾಪಾಡುವುದರಲ್ಲಿ ಪೊಲೀಸ್ ಸಿಬ್ಬಂದಿಯ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಕೋಮು ಹಾಗೂ ದುಷ್ಟ ಶಕ್ತಿಗಳ ನಿಗ್ರಹದಲ್ಲಿ ಅವರ ಸೇವೆ ಶ್ಲಾಘನೀಯ" ಎಂದರು.

ಸಂವಿಧಾನವು ನೀಡಿದ ಜನರ ಹಕ್ಕುಗಳನ್ನು ಕಾಪಾಡುವ ಕೆಲಸವನ್ನೂ ಪೊಲೀಸ್ ಇಲಾಖೆ ನಿರ್ವಹಿಸುತ್ತಿದೆ ಎಂದು ಅವರು ಹೇಳಿದರು.

ಮುಖ್ಯಮಂತ್ರಿಗಳು ಮುಂದೆ ಮಾತನಾಡಿ, ಪೊಲೀಸ್ ಇಲಾಖೆಯಲ್ಲಿ 116 ಮಂದಿಗೆ ಅನುಕಂಪದ ನೇಮಕಾತಿ ನೀಡಲಾಗಿದೆ. ನಿವೃತ್ತ ಪೊಲೀಸ್‌ಗಳ ಆರೋಗ್ಯ ಯೋಜನೆಯಡಿ ವೈದ್ಯಕೀಯ ಮರುಪಾವತಿ ಮಿತಿ 1 ಲಕ್ಷದಿಂದ 1.50 ಲಕ್ಷ ರೂ.ಗೆ ಹೆಚ್ಚಿಸಲಾಗಿದೆ. ಜೊತೆಗೆ ಎಲ್ಲಾ ಪೊಲೀಸ್ ಸಿಬ್ಬಂದಿಗಳ ಆರೋಗ್ಯ ತಪಾಸಣಾ ವೆಚ್ಚ 1000 ರೂ.ಗಳಿಂದ 1500 ರೂ.ಗೆ ಏರಿಕೆಗೊಂಡಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗೃಹ ಸಚಿವ ಡಾ. ಜಿ. ಪರಮೇಶ್ವರ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮ್ಮದ್, ಪೊಲೀಸ್ ಮಹಾನಿರ್ದೇಶಕ ಅಲೋಕ್ ಮೋಹನ್, ಹಾಗೂ ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್ ಸೇರಿದಂತೆ ಹಲವು ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

### ಅಧಿಕಾರಿಗಳಿಗೆ ಮುಖ್ಯಮಂತ್ರಿ ಸೂಚನೆ

## ಬೆಂಗಳೂರಿನ ರಸ್ತೆ ಗುಂಡಿಗಳನ್ನು ಒಂದು ವಾರದೊಳಗೆ ಮುಚ್ಚಿ

**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಗಳವಾರ ನಗರದಲ್ಲಿನ ಎಲ್ಲ ಗುಂಡಿಗಳನ್ನು ಒಂದು ವಾರದೊಳಗೆ ಮುಚ್ಚುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಕಳೆದ ತಿಂಗಳು ಮುಖ್ಯಮಂತ್ರಿಗಳು ನಗರದ ಐದು ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಅಕ್ಟೋಬರ್ 31 ರೊಳಗೆ ಗುಂಡಿಗಳನ್ನು ಮುಚ್ಚಲು ಗಡುವು ವಿಧಿಸಿತ್ತು.



ನಾನು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತ ಮಹೇಶ್ವರ ರಾವ್ ಮತ್ತು ನಗರಾಭಿವೃದ್ಧಿ ಇಲಾಖೆಯ ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್ ಸೇರಿದಂತೆ ಅಧಿಕಾರಿಗಳೊಂದಿಗೆ ಮಾತನಾಡಿದ್ದೇನೆ. ಒಂದು ವಾರದೊಳಗೆ ಗುಂಡಿಗಳನ್ನು ಮುಚ್ಚಬೇಕು' ಎಂದು ಸಿದ್ದರಾಮಯ್ಯ ಹೇಳಿದರು. ಗಾಂಧಿನಗರ ವಿಧಾನಸಭಾ ಕ್ಷೇತ್ರದಲ್ಲಿ ವೈಟ್ ಟಾಪಿಂಗ್ ಸೇರಿದಂತೆ ರಸ್ತೆಗಳ ಸಮಗ್ರ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಿದ ನಂತರ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, 'ಮಳೆಯಿಂದಾಗಿ ಗುಂಡಿಗಳನ್ನು ಮುಚ್ಚುವಲ್ಲಿ ವಿಳಂಬವಾಗಿದೆ; ಅದೇ ಸಮಸ್ಯೆ. ಈ ವರ್ಷ ಹೆಚ್ಚು ಮಳೆಯಾಗಿದೆ' ಎಂದು ಹೇಳಿದರು. ನಗರದ ವಿವಿಧ ಭಾಗಗಳಲ್ಲಿ ವೈಟ್ ಟಾಪಿಂಗ್ ಕೆಲಸ ನಡೆಯುತ್ತಿದ್ದು, ವೈಟ್ ಟಾಪಿಂಗ್ ರಸ್ತೆಗಳು 25 ರಿಂದ 30 ವರ್ಷ ಬಾಳಿಕೆ ಬರುವುದರಿಂದ ಗುಂಡಿಗಳ ಸಮಸ್ಯೆಯನ್ನು ಕಡಿಮೆ ಮಾಡಲು ಇದು ಸಹಾಯ ಮಾಡುತ್ತದೆ. ನಗರದಲ್ಲಿನ ಗುಂಡಿಗಳನ್ನು ಮುಚ್ಚುತ್ತೇವೆ ಮತ್ತು ರಸ್ತೆಗಳಿಗೆ ವೈಟ್ ಟಾಪಿಂಗ್ ಕೂಡ ಮಾಡುತ್ತೇವೆ ಎಂದು ಅವರು ಹೇಳಿದರು.

## ಇನ್ನೂ 10ದಿನ ಮಳೆ ಮುಂದುವರಿಕೆ

**ಬೆಂಗಳೂರು:** ರಾಜ್ಯದಲ್ಲಿ ವರುಣಾರ್ಭಟ ಮುಂದುವರೆದಿದ್ದು ಮುಂದಿನ 10 ದಿನಗಳ ಕಾಲ ರಾಜ್ಯಾದ್ಯಂತ ಮಳೆ ಮುಂದುವರೆಯುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ. ರಾಜ್ಯದಲ್ಲಿ ಮಳೆ ಮತ್ತಷ್ಟು ದಿನ ಮುಂದುವರಿಯುವ ಸಾಧ್ಯತೆ ಇದ್ದು, ಮುಂದಿನ 10 ದಿನಗಳ ಕಾಲ ರಾಜ್ಯದಲ್ಲಿ ಮಳೆ ಮುಂದುವರೆಯಲಿದೆ. ಕರಾವಳಿ ಜಿಲ್ಲೆಗಳಲ್ಲಿ ವರುಣ ಅಬ್ಬರಿಸಲಿದ್ದು, ಚಾಮರಾಜನಗರದಲ್ಲೂ ಉತ್ತಮ ಮಳೆಯಾಗುವ ನಿರೀಕ್ಷೆ ಇದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ. ಭಾರಿ ಮಳೆ ಸಾಧ್ಯತೆ: ಪ್ರಮುಖವಾಗಿ ನಾಳೆ ರಾಜ್ಯದಲ್ಲಿ ಭಾರಿ ಮಳೆಯಾಗುವ ಸಾಧ್ಯತೆ ಇದ್ದು, ರಾಜ್ಯದ 7 ಜಿಲ್ಲೆಗಳಲ್ಲಿ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಉಳಿದ 24 ಜಿಲ್ಲೆಗಳಲ್ಲಿಯೂ ಸಾಧಾರಣ ಮಳೆಯಾಗಲಿರುವ ಹಿನ್ನಲೆಯಲ್ಲಿ ಯೆಲ್ಲೋ ಅಲರ್ಟ್ ಇರಲಿದೆ.






ದೀಪಾವಳಿ ಹಬ್ಬದ ಹಾಗೂ
ಕನ್ನಡ ರಾಜ್ಯೋತ್ಸವದ
ಹಾರ್ದಿಕ ಶುಭಾಶಯಗಳು

ದೀಪಾವಳಿ ಬರೀ ಹಬ್ಬವಲ್ಲ, ನಮ್ಮ ಸಂಸ್ಕೃತಿಯ ಸಾರ

ಅಧ್ಯಕ್ಷರು ಉಪಾಧ್ಯಕ್ಷರು
ಗ್ರಾಮ ಪಂಚಾಯತ ಕಾರ್ಯಾಲಯ ಸಂಪಗಾಂವ
ತಾ. ಬೈಲಹೊಂಗಲ, ಜಿ. ಬೆಳಗಾವಿ,
ಸದಸ್ಯರು, ಪಿಡಿಓ, ಕಾರ್ಯದರ್ಶಿ ಹಾಗೂ ಸಿಬ್ಬಂದಿ ವರ್ಗ

ದೀಪಾವಳಿ ಹಬ್ಬದ ಹಾಗೂ
ಕನ್ನಡ ರಾಜ್ಯೋತ್ಸವದ
ಹಾರ್ದಿಕ ಶುಭಾಶಯಗಳು

ಸರ್ವೋತ್ಕೃಷ್ಟ ಬೆಳಕು ನಿಮ್ಮ ಮನಸ್ಸನ್ನು ಬೆಳಗಿಸಲಿ,ನಿಮ್ಮ ಹೃದಯಗಳನ್ನು ಪ್ರಬುದ್ಧಗೊಳಿಸಲಿ ಮತ್ತು ನಿಮ್ಮ ಮನೆಗಳು ಮತ್ತು ಸಮುದಾಯಗಳಲ್ಲಿನ ಮಾನವ ಬಂಧಗಳನ್ನು ಬಲಪಡಿಸಲಿ

ಅಧ್ಯಕ್ಷರು ಉಪಾಧ್ಯಕ್ಷರು
ಗ್ರಾಮ ಪಂಚಾಯತ ಕಾರ್ಯಾಲಯ ಬೈಲವಾಡ,
ತಾ. ಬೈಲಹೊಂಗಲ, ಜಿ. ಬೆಳಗಾವಿ
ಸದಸ್ಯರು, ಪಿಡಿಓ, ಕಾರ್ಯದರ್ಶಿ ಹಾಗೂ ಸಿಬ್ಬಂದಿ ವರ್ಗ ಬೈಲವಾಡ

# ನಾಳೆ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ

**ವಿಜಯಪುರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿಯನ್ನು ಅಕ್ಟೋಬರ್ 23ರಂದು ಹಮ್ಮಿಕೊಳ್ಳಲಾಗಿದೆ.

ಅಂದು ಬೆಳಗ್ಗೆ 9.30ಗಂಟೆಗೆ ಕಿತ್ತೂರು ರಾಣಿ ಚೆನ್ನಮ್ಮ ಅವರ ಭಾವಚಿತ್ರದ ಮೆರವಣಿಗೆಯೂ ಶ್ರೀ ಸಿದ್ದೇಶ್ವರ ದೇವಸ್ಥಾನದ ಆವರಣದಿಂದ ಪ್ರಾರಂಭಗೊಂಡು ವಿವಿಧ ಕಲಾ ತಂಡಗಳೊಂದಿಗೆ ಗಾಂಧಿ ಚೌಕ, ಬಸವೇಶ್ವರ ವೃತ್ತ, ಅಂಬೇಡ್ಕರ್ ವೃತ್ತ ಮಾರ್ಗವಾಗಿ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಸಮಾವೇಶಗೊಳ್ಳಲಿದ್ದು, ಅದೇ ದಿನ ಬೆಳಗ್ಗೆ 10.30 ಗಂಟೆಗೆ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿಯೇ ವೇದಿಕೆ ಕಾರ್ಯಕ್ರಮ ಜರುಗಲಿದೆ. ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಂ.ಬಿ.ಪಾಟೀಲ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಪಾಟೀಲ ಅವರು ಗೌರವ ಉಪಸ್ಥಿತರಿರಲಿದ್ದಾರೆ.

ಶಾಸಕ ಬಸನಗೌಡ ಆರ್.ಪಾಟೀಲ (ಯತ್ನಾಳ) ಅವರು ಅಧ್ಯಕ್ಷತೆ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕರಾದ ರವಿಕುಮಾರ ಎನ್, ವಿಧಾನ ಪರಿಷತ್ತಿನ ಶಾಸಕ ಹಾಗೂ ನವದೆಹಲಿಯ ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ- 2 ಪ್ರಕಾಶ ಹುಕ್ಕೇರಿ, ಶಾಸಕ ಹಾಗೂ ಕರ್ನಾಟಕ ಸೋಪ್ಸ್ ಮತ್ತು ಡಿಟರ್ಜೆಂಟ್ ನಿಯಮಿತದ ಅಧ್ಯಕ್ಷ ಅಪ್ಪಾಜಿ ಸಿ.ಎಸ್.ನಾಡಗೌಡ, ಸಂಸದರಾದ ರಮೇಶ ಜಿಗಜಿಣಗಿ, ಸುಧಾ ಮೂರ್ತಿ, ಶಾಸಕರಾದ ಯಶವಂತರಾಯಗೌಡ ಪಾಟೀಲ, ಹಣಮಂತ ನಿರಾಣಿ, ಸುನೀಲಗೌಡ ಪಾಟೀಲ, ಪಿ.ಎಚ್.ಪೂಜಾರ, ವಿಠ್ಠಲ ಕಟಕಧೋಂಡ, ರಾಜುಗೌಡ ಪಾಟೀಲ, ಅಶೋಕ ಮನಗೂಳಿ, ಕೇಶವ ಪ್ರಸಾದ. ಎಸ್, ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದ ಅಧ್ಯಕ್ಷೆ ಕಾಂತಾ ನಾಯ್ಕ, ಕರ್ನಾಟಕ ಬಾಲವಿಕಾಸ ಅಕಾಡೆಮಿ ಅಧ್ಯಕ್ಷರಾದ ಸಂಗಮೇಶ ಬಬಲೇಶ್ವರ, ಪಾಲಿಕೆಯ ಮೇಯರ್ ಮಡಿವಾಳಪ್ಪ ಸಿದ್ದರಾಮಪ್ಪ ಕರಡಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕನಾನ್ ಮುಶ್ರೀಫ್ ಗ್ಯಾರಂಟಿ ಯೋಜನೆಗಳ ಸಮಿತಿ ಅಧ್ಯಕ್ಷರಾದ ಇಲಿಯಾಸ ಬೋರಾಮಣಿ ಭಾಗವಹಿಸಲಿದ್ದಾರೆ.

ದೀಪಾವಳಿ ಹಬ್ಬದ ಹಾಗೂ
ಕನ್ನಡ ರಾಜ್ಯೋತ್ಸವದ
ಹಾರ್ದಿಕ ಶುಭಾಶಯಗಳು

ಮೂಡಲಿ ಖುಷಿಯ ಚಿತ್ತಾರ ದೂರವಾಗಲಿ ಬದುಕಿನ ಅಂಧಕಾರ ತುಂಬಲಿ ಮನೆ ಮನಗಳಲ್ಲಿ ಸಡಗರ

ಅಧ್ಯಕ್ಷರು ಉಪಾಧ್ಯಕ್ಷರು
ಗ್ರಾಮ ಪಂಚಾಯತ ಕಾರ್ಯಾಲಯ ದೇವಲಾಪುರ
ತಾ. ಬೈಲಹೊಂಗಲ, ಜಿ. ಬೆಳಗಾವಿ,
ಸದಸ್ಯರು, ಪಿಡಿಓ, ಕಾರ್ಯದರ್ಶಿ ಹಾಗೂ ಸಿಬ್ಬಂದಿ ವರ್ಗ

ದೀಪಾವಳಿ ಹಬ್ಬದ ಹಾಗೂ
ಕನ್ನಡ ರಾಜ್ಯೋತ್ಸವದ
ಹಾರ್ದಿಕ ಶುಭಾಶಯಗಳು

ಈ ದೀಪಾವಳಿಯಲ್ಲಿ ನಿಮ್ಮ ಬಾಳಿಗೆ ಬೆಳಕು ಬಾಳಲಿ, ಸುಖ ಶಾಂತಿಯ ದೀಪಗಳು ನಿಮ್ಮ ಹಳೆಯದನ್ನು ಬೆಳಗಲಿ.

ಅಧ್ಯಕ್ಷರು ಉಪಾಧ್ಯಕ್ಷರು
ಗ್ರಾಮ ಪಂಚಾಯತ ಕಾರ್ಯಾಲಯ ಇಂಚಲ
ತಾ. ಸವದತ್ತಿ, ಜಿ. ಬೆಳಗಾವಿ,
ಸದಸ್ಯರು, ಪಿಡಿಓ, ಕಾರ್ಯದರ್ಶಿ ಹಾಗೂ ಸಿಬ್ಬಂದಿ ವರ್ಗ ಇಂಚಲ

|| ಸ್ಮರಣೆ ||



ದಿ. ಶ್ರೀ ಸಿದ್ದಪ್ಪಾ ಯಮನಪ್ಪಾ. ಬಾಸ್ಕರ
ಜನನ–01–06–1960 ಮರಣ–22–10–1997

ತಾವು ನಮ್ಮನ್ನೆಲ್ಲಾ ಅಗಲಿ ಇಂದಿಗೆ 28 ವರ್ಷಗಳು ಗತಿಸಿದವು.
ನಿಮ್ಮ ನೆನಮು ಸದಾ ನಮ್ಮ ಹೃದಯದಲ್ಲಿ
ತಾವು ಹಾಕಿಕೊಟ್ಟ ಆದರ್ಶದ ಸನ್ಮಾರ್ಗದಲ್ಲಿ ನಡೆಯುತ್ತಿದ್ದೇವೆ.
ತಮ್ಮ ಆತ್ಮಕ್ಕೆ ಭಗವಂತನು
ಚಿರಶಾಂತಿಯನ್ನೀಯಲೆಂದು ಕೋರುವ

ದು:ಖತಪ್ತ
ಪತ್ನಿ, ಮಕ್ಕಳು, ಸೊಸೆಯಂದಿರು, ಮೊಮ್ಮಕ್ಕಳು, ಸಹೋದರರು
ಹಾಗೂ ಅಪಾರ ಬಂಧು ಬಳಗ
ಸಾ॥ ಬೆಳವಿ ತಾ॥ ಹುಕ್ಕೇರಿ, ಜಿ॥ ಬೆಳಗಾವಿ.

ದೀಪಾವಳಿ ಹಬ್ಬದ ಶುಭಾಶಯಗಳು

ದೀಪಾವಳಿಯ ಈ ಶುಭ ಸಂದರ್ಭದಲ್ಲಿ,
ನಿಮ್ಮ ಬದುಕು ಯಶಸ್ಸು, ಸಂತೋಷ,
ಪ್ರೀತಿ ಮತ್ತು ಶಾಂತಿಯಿಂದ ತುಂಬಿರಲಿ.

A.M.Shidramani.Vice-President Advocate
Bar Association Bailhongal

ಸಮಸ್ತ ನಾಡಿನ ಜನತೆಗೆ
ದೀಪಾವಳಿ ಹಬ್ಬದ
ಹಾರ್ದಿಕ ಶುಭಾಶಯಗಳು

ಸರಿಯಲಿ ಹೊಸ ಬೆಳಕು,
ಬೆಳಗಲಿ ನೀತಿಯ ಬದುಕು,
ಚೆಲ್ಲಲಿ ಹೊಂಬೆಳಕು ನಿಮ್ಮ ಬಾಳಲಿ.

ಶ್ರೀ ಎಂ. ಆರ್. ಮೆಳವಂಕಿ,
ಅಧ್ಯಕ್ಷರು ನ್ಯಾಯವಾದಿಗಳ ಸಂಘ ಬೈಲಹೊಂಗಲ,
ಮಾಜಿ ಸದಸ್ಯರು, ಗ್ರಾಮ ಪಂಚಾಯತ ನೇಗಿನಹಾಳ,
2025 ನೇ ಸಾಲಿನ ಕಾಯಕ ರತ್ನ ಪ್ರಶಸ್ತಿ ಪುರಸ್ಕೃತರು
ಸಾ : ನೇಗಿನಹಾಳ, ತಾ. ಬೈಲಹೊಂಗಲ ಜಿ. ಬೆಳಗಾವಿ

Kirloskar
Ferrous

ನಾಡಿನ ಸಮಸ್ತ ಜನತೆಗೆ
ದೀಪಾವಳಿ ಹಬ್ಬದ ಹಾರ್ದಿಕ ಶುಭಾಶಯಗಳು

Happy Deepavali

Kirloskar Ferrous Industries Limited
A Kirloskar Group Company
Bevinahalli-583234, Tq. & Dist. Koppal

ಬೆಳಕಿನ ಹಬ್ಬ ಎಲ್ಲರ ಬಾಳಲ್ಲಿ ಬೆಳಕು ಚೆಲ್ಲಲಿ
ದೀಪಾವಳಿ ಹಬ್ಬದ
ಹಾರ್ದಿಕ ಶುಭಾಶಯಗಳು

ಗ್ರಾಮ ಪಂಚಾಯತ ಹೊಸಕೇರಿ
ತಾ.ರಾಮದುರ್ಗ ಜಿ.ಬೆಳಗಾವಿ

ಶ್ರೀ ಈರಣ್ಣ ಶಿ ಹರನಟ್ಟಿ
ಅಧ್ಯಕ್ಷರು

ಶ್ರೀಮತಿ ಶಂಕ್ರವ್ವ ಯ ತಳವಾರ
ಉಪಾಧ್ಯಕ್ಷರು

ಶ್ರೀ ಬೀಮಪ್ಪ ಶಿ ಬೆಳವಣಕಿ
ಸದಸ್ಯರು

.ಶ್ರೀ ಮಂಜುನಾಥ ಕಾ ಹೆಡೆನ್ನವರ
ಸದಸ್ಯರು

ಶ್ರೀ ರಮೇಶ ಬಿ ಹೊಳೆನ್ನವರ
ಸದಸ್ಯರು

.ಶ್ರೀಮತಿ ಮುತ್ತವ್ವ ಶೆ ಶಿಪರದವರ
ಸದಸ್ಯರು

ಶ್ರೀಮತಿ ಸಾವಕ್ಕಾ ಯ ಘಟ್ನೂರ
ಸದಸ್ಯರು

.ಶ್ರೀಮತಿ ಶಿವಕ್ಕ ಹ ಮಾದರ
ಸದಸ್ಯರು

ಶ್ರೀಮತಿ ಬಸವ್ವ ಫ ಅಂಬಿಗೇರ
ಸದಸ್ಯರು

.ಶ್ರೀ ಯಂಕಪ್ಪ ರಾ ಕಲಾಲ
ಸದಸ್ಯರು

ಶ್ರೀ ಹನುಮಂತ ಭೀ ಕುರಿ
ಸದಸ್ಯರು

ಶ್ರೀಮತಿ ಫಾತಿಮಾ ಮ ನರಗುಂದ
ಸದಸ್ಯರು

ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ಬಲರಾಮ ಲಮಾಣಿ ಹಾಗೂ ಸಿಬ್ಬಂದಿ ವರ್ಗ